ಬೆಂಗಳೂರು ನಗರ ವಿಶ್ವವಿದ್ಯಾನಿಲಯ
BENGALURU CITY UNIVERSITY
ಸೆಂಟ್ರಲ್ ಕಾಲೇಜು ಆವರಣ, ಡಾ॥ ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು– 560 001.
Ph.No.080-22961016 / 22131385 E-Mail ID: registrar@bcu.ac.in

ಸಂಖ್ಯೆ: ಬೆಂ.ನ.ವಿ./ಸಿಬ್ಬಂದಿ/ಅ.ಪ್ರ.ದಿ/2023–24/290 ದಿನಾಂಕ: 13.09.2023

ಸುತ್ತೋಲೆ

ವಿಷಯ: ದಿನಾಂಕ: 15–09–2023 ರಂದು ಅಂತರಾಷ್ಟ್ರೀಯ ಪ್ರಭುತ್ವದ ದಿನಾಚರಣೆಯನ್ನು ಆಚರಿಸುವ ಬಗ್ಗೆ.

ಉಲ್ಲೇಖ: ಸಹಾಯಕ ನಿರ್ದೇಶಕರು (ಗ್ರೇಡ್–1) ಸಮಾಜ ಕಲ್ಯಾಣ ಇಲಾಖೆ ರವರ ಪತ್ರ ಸಂಖ್ಯೆ: ಸನಿ:ಸಕಇ:ಬೆಂ(ಉ):ಸಿಆರ್:2023–24, ದಿನಾಂಕ: 07.09.2023.

ಸಮಾಜ ಕಲ್ಯಾಣ ಇಲಾಖೆವತಿಯಿಂದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವದ ದಿನಾಚರಣೆಯನ್ನು ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 15.09.2023 ರಂದು ವಿಧಾನಸೌಧ (ಗ್ರಾಂಡ್ ಸ್ಟೆಪ್ಸ್) ಮುಂಭಾಗದಲ್ಲಿ ಆಯೋಜಿಸಲು ನಿರ್ಧರಿಸಲಾಗಿರುತ್ತದೆ. ಅದರಂತೆ ಈ ಬಗ್ಗೆ ಜನರಲ್ಲಿ ಹೆಚ್ಚಿನ ಅರಿವು ಮೂಡಿಸಲು ವ್ಯಾಪಕ ಪ್ರಚಾರ ನೀಡಲು ಹಾಗೂ ಸಂವಿಧಾನದ ಪ್ರಾಮುಖ್ಯತೆಯನ್ನು ತಿಳಿಸಲು ಸೂಕ್ತ ಕ್ರಮವಹಿಸಿ ಅತೀ ಹೆಚ್ಚಿನ ಸಂಖ್ಯೆಯಲ್ಲಿ https://thepreamble-swdkar.in ಲಿಂಕ್‌ನಲ್ಲಿ ದಿನಾಂಕ: 14.09.2023 ರಂದು ಸಂಜೆ 6.00 ಗಂಟೆಯೊಳಗೆ ನೋಂದಣಿ ಮಾಡಿಕೊಂಡು, ದಿನಾಂಕ: 15.09.2023 ರಂದು ಬೆಳಗ್ಗೆ 10.00 ಗಂಟೆಗೆ ಸಂವಿಧಾನದ ಪ್ರಸ್ತಾವನೆಯನ್ನು ಸಾಮೂಹಿಕವಾಗಿ ಓದಿ, ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಆಚರಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ವಿದ್ಯಾರ್ಥಿಗಳು, ಸಂಯೋಜಿತಾ/ಸ್ವಾಯತ್ತ ಕಾಲೇಜುಗಳಲ್ಲಿನ ಶಿಕ್ಷಕರು/ಶಿಕ್ಷಕೇತರರು ಹಾಗೂ ವಿದ್ಯಾರ್ಥಿಗಳು ಸದರಿ ಕಾರ್ಯಕ್ರಮದ ಕುರಿತು ಮೇಲೆ ತಿಳಿಸಿರುವ ಲಿಂಕ್‌ನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಕೊಳ್ಳುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿ, ಸದರಿ ಲಿಂಕ್‌ನಲ್ಲಿ ನೋಂದಣಿ ಮಾಡಿಕೊಂಡಿರುವ ವಿವರವನ್ನು ದಿನಾಂಕ: 14.09.2023 ರಂದು ಸಂಜೆ 5.00 ಗಂಟೆಯೊಳಗೆ ಸಮಾಜ ಕಲ್ಯಾಣ ಇಲಾಖೆಗೆ ವರದಿ ನೀಡಲು ಸೂಚಿಸಲಾಗಿದೆ. ಪ್ರತಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು.

ಮುಂದುವರೆದು, ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ವಿದ್ಯಾರ್ಥಿಗಳು, ಶಿಕ್ಷಕರು/ಶಿಕ್ಷಕೇತರರು ದಿನಾಂಕ: 15.09.2023 ರಂದು ಬೆಳಗ್ಗೆ 10.00 ಗಂಟೆಗೆ ಕುಲಸಚಿವರ ಕಛೇರಿಯ ಮುಂಭಾಗದಲ್ಲಿ ನಡೆಯುವ ಸಂವಿಧಾನ ಪ್ರಸ್ತಾವನೆಯ ಸಾಮೂಹಿಕ ಪ್ರತಿಜ್ಞೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಸೂಚಿಸಲಾಗಿದೆ. ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರು ಮತ್ತು ರಾಷ್ಟ್ರೀಯ ಹಬ್ಬದ ಸಂಚಾಲಕರಾದ ಡಾ: ಕೆ. ಶಿವಶಂಕರ್, ಪ್ರಾಧ್ಯಾಪಕರು, ರಸಾಯನಶಾಸ್ತ್ರ ವಿಭಾಗ ವಿಶ್ವವಿದ್ಯಾನಿಲಯದಲ್ಲಿ ಅಂತರಾಷ್ಟ್ರೀಯ ಪ್ರಭುತ್ವದ ದಿನಾಚರಣೆಯನ್ನು ಆಚರಿಸುವ ಕುರಿತು ಅಗತ್ಯ ಕ್ರಮಕೈಗೊಳ್ಳುವಂತೆ ನಿರ್ದೇಶಿಸಲಾಗಿದೆ.

ಕುಲಸಚಿವರು (ಆ)

ಕುಲಸಚಿವರು
ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಸೆಂಟ್ರಲ್ ಕಾಲೇಜು ಆವರಣ
ಬೆಂಗಳೂರು - 560 001

ಗೆ,

1. ವಿಶ್ವವಿದ್ಯಾನಿಯದ ಎಲ್ಲಾ ನಿಕಾಯಗಳ ಡೀನರು.
2. ಬೆಂಗಳೂರು ನಗರ ವಿಶ್ವವಿದ್ಯಾನಿಯದ ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರು – ಅಗತ್ಯ ಕ್ರಮಕ್ಕಾಗಿ.
3. ವಿಶ್ವವಿದ್ಯಾನಿಲಯದ ಎಲ್ಲಾ ಬೋಧಕ/ಬೋಧಕೇತರರು ಸಿಬ್ಬಂದಿಗಳು.
4. ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ/ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರು – ಅಗತ್ಯ ಕ್ರಮಕ್ಕಾಗಿ.

ಪು.ತಿ.ನೋ.

ಪ್ರತಿ:

1. ಕುಲಪತಿಯವರು, ಕುಲಸಚಿವರು (ಮೌಲ್ಯಮಾಪನ), ವಿತ್ತಾಧಿಕಾರಿಯವರುಗಳ ಆಪ್ತಕಾರ್ಯದರ್ಶಿಯವರುಗಳಿಗೆ, ಬೆಂ.ನ.ವಿ. ಬೆಂಗಳೂರು.
2. ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವಂತೆ ಈ ಮೂಲಕ ಕೋರಲಾಗಿದೆ.
3. ಕಛೇರಿ ಪ್ರತಿ / ರಕ್ಷಾ ಕಡತ.